**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/41/ಇಎಸ್‌ಟಿ(2)ಎ/2014

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560001,
ದಿನಾಂಕ:20-08-2015.

**ಸುತ್ತೋಲೆ**

ವಿಷಯ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಸ್ಥಳೀಯ ವೃಂದ ಮತ್ತು ಉಳಿಕೆ ವೃಂದಗಳಿಗೆ ಸಿಬ್ಬಂದಿಯವರನ್ನು ಹಂಚಿಕೆ ಮಾಡುವ ಬಗ್ಗೆ.

ಉಲ್ಲೇಖ 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಟಿಎಲ್‌ಎಕ್ಸ್ ದಿ:06-11-2013

2. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಹೆಚ್‌ಜೆಸಿ 2013 ದಿ: 29-01-2014 ಮತ್ತು 20-10-2014.

*-*-*

ಭಾರತ ಸರ್ಕಾರವು ಸಂವಿಧಾನದ ಅನುಚ್ಛೇದ 371(ಜೆ) ಗೆ ತಿದ್ದುಪಡಿ ತರಲಾಗಿದ್ದು, ಅದರಂತೆ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿರುವ ಹಾಗೂ ರಾಜ್ಯದ ರಾಜಧಾನಿಯಲ್ಲಿರುವ ಕೇಂದ್ರ ಕಛೇರಿ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿನ ಎಲ್ಲಾ ವೃಂದದ ಹುದ್ದೆಗಳಿಗೆ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 206 ಡಿಟಿಇ 2014 ದಿ: 22-04-2015ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಬರುವ ಎಲ್ಲಾ ಸಂಸ್ಥೆಗಳಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದವರಿಗೆ ಮೀಸಲಾತಿ ಕಲ್ಪಿಸುವ ದೃಷ್ಟಿಯಿಂದ ಹೈದ್ರಾಬಾದ್-ಕರ್ನಾಟಕ ಸ್ಥಳಿಯ ವೃಂದದ ಗ್ರೂಪ್-ಎ(ಕಿರಿಯ ಶ್ರೇಣಿ) ಮತ್ತು ಗ್ರೂಪ್-ಬಿ ವೃಂದಕ್ಕೆ ಶೇ.75 ರಷ್ಟು, ಗ್ರೂಪ್-ಸಿ ವೃಂದಕ್ಕೆ ಶೇ.80 ಮತ್ತು ಗ್ರೂಪ್-ಡಿ ವೃಂದಕ್ಕೆ ಶೇ.85ರಷ್ಟು ಹುದ್ದೆಗಳನ್ನು ಮೀಸಲಿರಿಸಿ, ಕೇಂದ್ರ ಕಛೇರಿ ಹಾಗೂ ರಾಜಧಾನಿ ಪ್ರದೇಶದ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿನ ಎಲ್ಲಾ ವೃಂದದವರಿಗೆ ಶೇ.8 ರಷ್ಟು ಹುದ್ದೆಗಳನ್ನು ಮೀಸಲಿರಿಸಲಾಗಿರುತ್ತದೆ.

ನಿರ್ದೇನಾಲಯದ ಪತ್ರ ಸಂಖ್ಯೆ: ಡಿಟಿಇ 24 ಇಎಸ್‌ಟಿ(1)ಎ 2013 ದಿ:04-05-2015 ರಲ್ಲಿ ಸ್ಥಳೀಯ ವೃಂದಕ್ಕೆ ಸೇರಲು ಇಚ್ಛಿಸುವ ಸಿಬ್ಬಂದಿಗಳಿಗೆ ನಿರ್ದಿಷ್ಟಪಡಿಸಲಾದ ಅನುಬಂಧ ಹಾಗೂ ದಾಖಲೆಗಳೊಂದಿಗೆ 45 ದಿನಗೊಳಗಾಗಿ ಅಭಿಮತ ಸಲ್ಲಿಸಲು ಸುತ್ತೋಲೆಯಲ್ಲಿ ತಿಳಿಸಲಾಗಿದ್ದು, ಅದರಂತೆ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವೃಂದಕ್ಕೆ ಸೇರಲು ಇಚ್ಛಿಸಿ ಅಭಿಮತ ಸಲ್ಲಿಸಿದ ಸಿಬ್ಬಂದಿಗಳನ್ನು ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವೃಂದಕ್ಕೆ ಸೇರಿದವರು ಎಂದು ಹಂಚಿಕೆ ಮಾಡಿ ಪ್ರಚುರಪಡಿಸಲಾಗಿರುತ್ತದೆ.

ಉಲ್ಲೇಖ (2) ರ ಪ್ರಕಾರ ಸ್ಥಳೀಯ ವೃಂದಕ್ಕೆ ಸೇರಿದವರನ್ನು ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ಹಂಚಿಕೆ ಮಾಡಬೇಕಾಗಿದ್ದು ಹಾಗೂ ಸ್ಥಳೀಯದಲ್ಲದವರು ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಅಂತಹ ಸಿಬ್ಬಂದಿಗಳನ್ನು ಹಂಚಿಕೆ ಮೂಲಕ ಸ್ಥಳ ನಿಯುಕ್ತಿಗೊಳಿಸುವುದು ಅವಶ್ಯಕವಾಗಿರುತ್ತದೆ. ಹೈದ್ರಾಬಾದ್-ಕರ್ನಾಟಕ ಕೇಂದ್ರ ಕಛೇರಿ ಹಾಗೂ ರಾಜ್ಯದ ರಾಜಧಾನಿ ಪ್ರದೇಶದಲ್ಲಿನ ಶಿಕ್ಷಣ ಸಂಸ್ಥೆಗಳಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸಿಬ್ಬಂದಿಗಳಿಗೆ ಗುರುತಿಸಲಾದ ಹುದ್ದೆಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿಲಾಗಿರುತ್ತದೆ.

**ಸ್ಥಳ: ಸರ್ಕಾರಿ ಮುದ್ರಣ ಮತ್ತು ತಂತ್ರಜ್ಞಾನ ಸಂಸ್ಥೆ, ಬೆಂಗಳೂರು**

| ದಿನಾಂಕ | ಸಮಯ | ಸಿಬ್ಬಂದಿ ವರ್ಗ |
|---|---|---|
| 29-08-2015 | ಬೆಳಗ್ಗೆ 9.00 ಗಂಟೆ | ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸಿಬ್ಬಂದಿಗಳ ಹಂಚಿಕೆ ಪ್ರಕ್ರಿಯೆ ಸರ್ಕಾರಿ ಇಂಜಿನಿಯರಿಂಗ್/ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಗ್ರೂಪ್-ಬಿ, ಸಿ ಮತ್ತು ಡಿ ಬೋಧಕ/ಬೋಧಕೇತರ ಸಿಬ್ಬಂದಿಗಳ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ) |

ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸಿಬ್ಬಂದಿಗಳ ಹಂಚಿಕೆ ಪ್ರಕ್ರಿಯೆಯನ್ನು ಈ ಕೆಳಕಂಡ ಷರತ್ತು ನಿಭಂದನೆಗಳ ಪ್ರಕಾರ ನಿಗದಿಪಡಿಸಲಾಗಿರುತ್ತದೆ.

1. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವೃಂದಕ್ಕೆ ಸೇರಿದ ಹಾಗೂ ಆ ಪ್ರದೇಶದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯನ್ನು ಹೊರತುಪಡಿಸಿ, ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ಸೇರಿದ್ದು ನಾನ್ ಹೈದ್ರಾಬಾದ್-ಕರ್ನಾಟಕ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರು ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ಹಂಚಿಕೆ (ಸ್ಥಳ ನಿಯುಕ್ತಿ) ಹೊಂದಲು ಹಂಚಿಕೆ ಪ್ರಕ್ರಿಯೆಯಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕಾಗಿರುತ್ತದೆ.
2. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವೃಂದಕ್ಕೆ ಸೇರಿದ ಸಿಬ್ಬಂದಿಗಳು ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲೆ ಕಾರ್ಯ ನಿರ್ವಹಿಸುತ್ತಿದಲ್ಲಿ ಅಂತಹ ಸಿಬ್ಬಂದಿಗಳು ಕೇಂದ್ರ ಕಛೇರಿ ಹಾಗೂ ರಾಜ್ಯದ ರಾಜಧಾನಿ ಶಿಕ್ಷಣ ಸಂಸ್ಥೆಗಳಿಗೆ ಹಂಚಿಕೆ ಪಡೆಯಲು ಮಾತ್ರ ಅರ್ಹರಾಗಿರುತ್ತಾರೆ ಹಾಗೂ ಹೈದ್ರಾಬಾದ್-ಕರ್ನಾಟಕ ಪ್ರದೇಶದ 06 ಜಿಲ್ಲೆಗಳಲ್ಲಿನ ಬೇರೆ ಸಂಸ್ಥೆಗಳಿಗೆ ಹಂಚಿಕೆ ಹೊಂದಲು ಈ ಪ್ರಕ್ರಿಯೆಯಲ್ಲಿ ಅವಕಾಶವಿರುವುದಿಲ್ಲ.
3. ಹಂಚಿಕೆ ಪ್ರಕ್ರಿಯೆಗೆ ಯಾವುದೇ ಸಿಬ್ಬಂದಿಯು ಹಾಜರಾಗದಿದ್ದಲ್ಲಿ ನಿಯಮಾನುಸಾರ ನಿರ್ದೇಶಕರ ಅಂತಿಮ ತೀರ್ಮಾನದಂತೆ ಹಂಚಿಕೆ ಮೂಲಕ ಸ್ಥಳ ನಿಯುಕ್ತಿ ಮಾಡಲಾಗುವುದು.
4. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವೃಂದಕ್ಕೆ ಸೇರಿಲ್ಲದ ಸಿಬ್ಬಂದಿಗಳು ಅವರು ಕಾರ್ಯ ನಿರ್ವಹಿಸುತ್ತಿದ್ದ ಸ್ಥಳಗಳಲ್ಲಿ ಅವರಿಗಾಗಿ ಗುರುತಿಸಲಾದ ಹುದ್ದೆಗಳಲ್ಲಿ (ಗ್ರೂಪ್-ಎ(ಕಿರಿಯ ಶ್ರೇಣಿ) ಮತ್ತು ಗ್ರೂಪ್-ಬಿ ವೃಂದಕ್ಕೆ ಶೇ.25 ರಷ್ಟು, ಗ್ರೂಪ್-ಸಿ ವೃಂದಕ್ಕೆ ಶೇ.20 ಮತ್ತು ಗ್ರೂಪ್-ಡಿ ವೃಂದಕ್ಕೆ ಶೇ.15ರಷ್ಟು) ಕಾರ್ಯನಿರ್ವಹಿಸುತ್ತಿರುವವರು ಸ್ಥಳ ನಿಯುಕ್ತಿಗೆ ಹಾಜರಾಗತಕ್ಕದ್ದು.
5. ಈ ಎಲ್ಲಾ ಪ್ರಕ್ರಿಯೆಗಳನ್ನು ಜೇಷ್ಠತೆ ಅನುಸಾರವೇ ಕೈಗೊಳ್ಳಲಾಗುವುದು.

ನಿರ್ದೇಶಕರು

**ಇವರಿಗೆ:**

1. ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್/ ಇಂಜಿನಿಯರಿಂಗ್ ಕಾಲೇಜು/ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರು

**ಪ್ರತಿ;**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬೆಂಗಳೂರು-01
2. ಎಲ್ಲಾ ಜಂಟಿ ನಿರ್ದೇಶಕರು/ ಆಡಳಿತಾಧಿಕಾರಿ/ ಸಹಾಯಕ ಆಡಳಿತಾಧಿಕಾರಿಗಳು/ ರಿಜಿಸ್ಟ್ರಾರ್ (ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದಶನಾಲಯ, ಬೆಂಗಳೂರು
3. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
4. ನಿರ್ದೇಶಕರ ಆಪ್ತಶಾಖೆ.
5. ಕಛೇರಿ ಪ್ರತಿ.